ನಿ-72 (94)

# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ 72 ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ

| | |
|---|---|
| ವಿಷಯ: | 2010ನೇ ಸಾಲಿನಲ್ಲಿ ಕೆ.ಪಿ.ಎಸ್.ಸಿ ಯಿಂದ ಉದ್ಯೋಗ ಮತ್ತು ತರಬೇತಿ ಇಲಾಖೆಗೆ 402 ಕಿರಿಯ ಅಧಿಕಾರಿಗಳು ನೇಮಕ ಹೊಂದಿ 08 ವರ್ಷಗಳು ಕಳೆದರೂ ಖಾಯಂ ಪೂರ್ಣ ಅವಧಿ ಘೋಷಣೆ ಮಾಡದೆ ಹಾಗೂ ವೇತನವನ್ನು ತಡೆಹಿಡಿಯಲಾಗಿದೆ. ಇದರಿಂದಾಗಿ ಈ ನೌಕರರು ಜೀವನ ನಡೆಸುವುದು ಕಷ್ಟಕರವಾಗಿರುತ್ತದೆ. ಇದನ್ನು ಸದರಿಪಡಿಸುವ ನಿಟ್ಟಿನಲ್ಲಿ ಹಾಗೂ ಖಾಯಂ ಪೂರ್ಣ ಅವಧಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯ ಬಯಸುತ್ತೇನೆ. |

* * *

2010ನೇ ಸಾಲಿನಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಉದ್ಯೋಗ ಮತ್ತು ತರಬೇತಿ ಇಲಾಖೆಗೆ 402 ಕಿರಿಯ ತರಬೇತಿ ಅಧಿಕಾರಿಗಳ ನೇಮಕಾತಿ ಮಾಡಿದ್ದು, ನೇಮಕಾತಿ ಸಮಯದಲ್ಲಿ ನಕಲಿ ಅನುಭವ ಪ್ರಮಾಣ ಪತ್ರ ಸಲ್ಲಿಸಿರುವರೆಂಬ ದೂರಿನ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 81 ಸಿಐಡಿ 2017 ದಿನಾಂಕ: 05/12/2017 ರಂದು ಸಿ.ಓ.ಡಿ / ಸಿ.ಐ.ಡಿ ತನಿಖೆಗೆ ವಹಿಸಿ ಆದೇಶಿಸಿದೆ.

ಪೊಲೀಸ್ ಮಹಾನಿರ್ದೇಶಕರು, ಸಿ.ಐ.ಡಿ, ವಿಶೇಷ ಘಟಕಗಳು ಮತ್ತು ಆರ್ಥಿಕ ಅಪರಾಧಗಳು, ಬೆಂಗಳೂರು, ರವರು ಬೆಂಗಳೂರು ನಗರ ಸಿದ್ದಾಪುರ ಪೊಲೀಸ್ ಠಾಣೆ ಮೊಕದ್ದಮೆ ಸಂಖ್ಯೆ:30/2017 ಕಲಂ–463, 465, 468, 471, 420 ಐ.ಪಿ.ಸಿ ಪ್ರಕರಣ ತನಿಖೆಯನ್ನು ನಡೆಸಿ, ದಿನಾಂಕ:31/01/2020 ರಂದು ಒಳಾಡಳಿತ ಇಲಾಖೆಗೆ ವರದಿಯನ್ನು ನೀಡಿರುತ್ತಾರೆ. ಒಳಾಡಳಿತ ಇಲಾಖೆಯಿಂದ ವರದಿ / ಅಭಿಪ್ರಾಯ ನಿರೀಕ್ಷಿಸಲಾಗಿದೆ.

ಪ್ರಸ್ತುತ ಸದರಿ ಕಿರಿಯ ತರಬೇತಿ ಅಧಿಕಾರಿಗಳಿಗೆ ವೇತನವನ್ನು ಮಾತ್ರ ನೀಡಲಾಗುತ್ತಿದ್ದು, ಪರಿವೀಕ್ಷಣಾ ಅವಧಿ ಘೋಷಣೆ ಹಾಗೂ ವಾರ್ಷಿಕ ಮುಂಬಡ್ತಿ ಮುಂತಾದವುಗಳನ್ನು ಒಳಾಡಳಿತ ಇಲಾಖೆಯಿಂದ ವರದಿ / ಅಭಿಪ್ರಾಯ ಸ್ವೀಕೃತವಾದ ನಂತರ ಪರಿಶೀಲಿಸಿ ನಿರ್ಧಾರ ತೆಗೆದುಕೊಂಡ ತದನಂತರ ಅರ್ಹ ಅಭ್ಯರ್ಥಿಗಳ ಖಾಯಂ ಪೂರ್ವ ಅವಧಿಯನ್ನು ಘೋಷಿಸಲು ಹಾಗೂ ಇನ್ನಿತರೆ ಸೌಲಭ್ಯಗಳನ್ನು ನೀಡಲು ನಿಯಮಾನುಸಾರ ಪರಿಶೀಲಿಸಲಾಗುವುದು.

* * * *

**ಕೌಉಜೀಇ 15 ಕೈತಪ್ರ 2020**

(ಡಾ.ಸಿ.ಎನ್.ಅಶ್ವತ್ಥ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು